ನಾಡ ಕಛೇರಿಗಳ ಬಗ್ಗೆ

1560 - ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಿಂದ ನಡೆಸುತ್ತಿರುವ ನಾಡ ಕಛೇರಿಗಳನ್ನು ಮುಚ್ಚುವ ನಿರ್ಧಾರವನ್ನು ಸರ್ಕಾರ ಹಿಂದೆ ಪ್ರಕಟಿಸಿರಲಿಲ್ಲವೆ;

ಆ) ಹಾಗಿದ್ದಲ್ಲಿ ವಿಚಾರ ಈಗ ಯಾವ ಹಂತದಲ್ಲಿದೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಮಂತ್ರಿಗಳು):

ಅ) ಹೌದು.

ಆ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಹಾಸನ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆ

1561 - ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಪಟ್ಟಣದ ಲಕ್ಷ್ಮೀಪುರ ಬಡಾವಣೆ ವಿದ್ಯಾನಗರ, ಚಿಕ್ಕನಾಳ್ ಪ್ರದೇಶಗಳಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ಈ ಪ್ರದೇಶದ ಜನರು ನೈರ್ಮಲ್ಯದ ದೃಷ್ಟಿಯಿಂದ ವಿಪರೀತ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಪ್ರದೇಶಗಳಲ್ಲಿ 1991-92ನೇ ಸಾಲಿನಲ್ಲಿ ಒಳಚರಂಡಿ ವ್ಯವಸ್ಥೆ ಮಾಡಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಈ ಪ್ರದೇಶಗಳಿಗೆ ಒಳಚರಂಡಿ ವ್ಯವಸ್ಥೆ ಮಾಡಲು ಸರ್ವೆ ಕಾರ್ಯವನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಕೈಗೊಂಡಿದ್ದು, ಆ ನಂತರ ಅಂದಾಜನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸರ್ಕಾರಕ್ಕೆ ಸಲ್ಲಿಸಿದಾಗ ಪರಿಶೀಲಿಸಲಾಗುವುದು.

ಹಾಸನ ಜಿಲ್ಲೆಯಲ್ಲಿ ಒಣಭೂಮಿ ಅಭಿವೃದ್ಧಿ ಯೋಜನೆ

1562 - ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ) : ಮಾನ್ಯ ಕೃಷಿ ಮತ್ತು ತೋಟಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯ ಯಾವ ಯಾವ ವಿಧಾನ ಸಭಾ ಕ್ಷೇತ್ರಗಳಲ್ಲಿ ಒಣಭೂಮಿ ಅಭಿವೃದ್ಧಿ ಯೋಜನೆಯು ಕಾರ್ಯಗತವಾಗುತ್ತಿದೆ. (ವಿವರವನ್ನು ಒದಗಿಸುವುದು)

ಆ) ಕಳೆದ ಮೂರು ವರ್ಷಗಳಿಂದ ವರ್ಷ ಒಂದಕ್ಕೆ ಈ ಯೋಜನೆಯು ಕಾರ್ಯಗತವಾಗುತ್ತಿರುವ ಯಾವ ಯಾವ ವಿಧಾನ ಸಭಾ ಕ್ಷೇತ್ರಗಳಿಗೆ ಎಷ್ಟೆಷ್ಟು ಹಣ ವಿನಿಯೋಗವಾಗುತ್ತದೆ (ವಿವರವನ್ನು ಒದಗಿಸುವುದು)?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕಾ ಸಚಿವರು):

ಅ) ಹಾಸನ ಮತ್ತು ಗಂಡಸಿ ವಿಧಾನಸಭಾ ಕ್ಷೇತ್ರಗಳಲ್ಲಿ ದೇವಿಹಳ್ಳ ಜಲಾನಯನ ಯೋಜನೆಯನ್ನು ಕಾರ್ಯಗತಗೊಳಿಸಲಾಗುತ್ತಿದೆ.